# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಅತ್ಯುತ್ತಮ ಪ್ರಗತಿ ಸಾಧಿಸಿದ ನಾಗರೀಕ ಸೇವಾ ಸಿಬ್ಬಂದಿಗೆ ರಾಜ್ಯ ಪ್ರಶಸ್ತಿ ನೀಡುವ ಬಗ್ಗೆ ವಿಶೇಷ ಯೋಜನೆಯನ್ನು ರದ್ದುಪಡಿಸುವ ಬಗ್ಗೆ.

ಓದಲಾಗಿದೆ:
1. ದಿನಾಂಕ: 30.8.95ರ ಸರ್ಕಾರದ ಆದೇಶ ಸಂ: ಸಿಆಸುಇ 126 ಎಎಆರ್ 95.
2. ದಿನಾಂಕ: 21.5.1998ರಂದು ಭಾರತ ಸರ್ಕಾರದ ಮಿನಿಸ್ಟ್ರಿ ಆಫ್ ಪರ್ಸನಲ್, ಪಬ್ಲಿಕ್ ಗ್ರಿವೆನ್ಸಸ್ ಅಂಡ್ ಪೆನ್ಸಷನ್ಸ್‌ರವರಿಂದ ಹೊರಡಿಸಲಾದ ಅಧಿಕೃತ ಜ್ಞಾಪನದ ಸಂ: 33011/1/97 ಓ ಅಂಡ್ ಎಂ.
3. ದಿನಾಂಕ: 26.7.2002ರ ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಟಿಪ್ಪಣಿ ಸಂ: ಸಿಎಸ್ 3413/02.
4. ದಿನಾಂಕ: 19.08.2010ರ ಭಾರತ ಸರ್ಕಾರದ ಕಛೇರಿ ಜ್ಞಾಪನ ಸಂ: 33011/1/2005 ಓ ಅಂಡ್ ಎಂ.
5. ದಿನಾಂಕ: 8.7.2010ರ ಕರ್ನಾಟಕ ಸರ್ಕಾರದ ಆದೇಶ ಸಂ: ಸಿಆಸುಇ 92 ಇಆಸು 2009.
6. ದಿನಾಂಕ: 13.08.2003ರ ಕರ್ನಾಟಕ ಸರ್ಕಾರದ ಆದೇಶ ಸಂ: ಸಿಆಸುಇ 34 ಇಆಸು 2002.

----

<u>ಪ್ರಸ್ತಾವನೆ:</u>

ಉಲ್ಲೇಖ (1)ರಲ್ಲಿ ಓದಲಾದ ದಿನಾಂಕ: 30.8.1995ರ ಸರ್ಕಾರದ ಆದೇಶದಲ್ಲಿ, ಅಸಾಧಾರಣ ಪ್ರತಿಭೆಯುಳ್ಳ ನಾಗರೀಕ ಸೇವಾ ಸಿಬ್ಬಂದಿಗೆ ರಾಜ್ಯ ಪ್ರಶಸ್ತಿ ನೀಡುವ ವಿಷಯವನ್ನು ಕುರಿತು ವಿಶೇಷ ಯೋಜನೆಯನ್ನು ತಯಾರಿಸಿ ಸೂಕ್ತ ಶಿಫಾರಸ್ಸುಗಳನ್ನು ನೀಡಲು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಕಾರ್ಯದರ್ಶಿಗಳ ಉನ್ನತ ಮಟ್ಟದ ಸಮಿತಿಯನ್ನು ರಚಿಸಲಾಯಿತು. ಈ ಸಮಿತಿಯು ತನ್ನ ವರದಿಯಲ್ಲಿ, ಮೂರು ಹಂತಗಳಲ್ಲಿ ಅಂದರೆ ಜಿಲ್ಲೆ, ಉಪ ವಿಭಾಗೀಯ ಹಾಗೂ ತಾಲ್ಲೂಕು ಮಟ್ಟದಲ್ಲಿ, ವೈಯಕ್ತಿಕ ಸಾಧನೆಯಲ್ಲಿ ಅಸಾಧಾರಣ ಪ್ರತಿಭೆ ತೋರಿಸಿದವರಿಗೆ ಪ್ರಶಸ್ತಿ ನೀಡಬಹುದೆಂದು ಸಲಹೆ ಮಾಡಿತ್ತು. ಸಮಿತಿಯ ಶಿಫಾರಸ್ಸುಗಳನ್ನು ಪರಿಗಣಿಸಿದ ನಂತರ, ಈ ತರಹದ ಯೋಜನೆಯು ಕಾರ್ಯಸಾಧುವಲ್ಲವೆಂದು ತೀರ್ಮಾನಿಸಿ, ಈ ಯೋಜನೆಯನ್ನು ಕೈಗೆತ್ತಿಕೊಳ್ಳಲಿಲ್ಲ.

2) ಉಲ್ಲೇಖ (2)ರಲ್ಲಿ ಓದಲಾದ ದಿನಾಂಕ: 21.5.1998ರ ಅಧಿಕೃತ ಜ್ಞಾಪನದಲ್ಲಿ ಕೇಂದ್ರ ಸರ್ಕಾರವು 1964ರಲ್ಲಿದ್ದು, ತನ್ನ ಯೋಜನೆಯನ್ನು ಸೂಕ್ತವಾಗಿ ಮಾರ್ಪಾಡು ಮಾಡಿ, ಅಸಾಧಾರಣ ಪ್ರತಿಭೆ ತೋರಿಸಿದ ತನ್ನ ನೌಕರರಿಗೆ ಪ್ರಶಸ್ತಿ/ ಪ್ರೋತ್ಸಾಹಧನವನ್ನು ಮಂಜೂರು ಮಾಡುವ ಬಗ್ಗೆ ಮಾರ್ಗಸೂಚಿಗಳನ್ನು ಹೊರಡಿಸಿತ್ತು.

3) ಉಲ್ಲೇಖ (3)ರಲ್ಲಿ ಓದಲಾದ ದಿನಾಂಕ: 26.7.2002ರ ಟಿಪ್ಪಣಿಯಲ್ಲಿ, ತಮ್ಮ ಕೆಲಸ ಕಾರ್ಯಗಳಲ್ಲಿ ಅಸಾಧಾರಣ ಪ್ರತಿಭೆ ತೋರಿಸಿದ ಅಧಿಕಾರಿಗಳಿಗೆ ಪ್ರಶಸ್ತಿ/ಪ್ರೋತ್ಸಾಹ ಧನವನ್ನು ನಿಡುವ ಸಲುವಾಗಿ ಮಾರ್ಗಸೂಚಿಗಳನ್ನು ರಚಿಸಲು ಈ ಕೆಳಕಂಡ ಅಧಿಕಾರಿಗಳನ್ನೊಳಗೊಂಡ ಸಮಿತಿಯೊಂದನ್ನು ಸರ್ಕಾರದ ಮುಖ್ಯ ಕಾರ್ಯದರ್ಶಿಯವರು ರಚಿಸಿದ್ದರು.

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ – ಅಧ್ಯಕ್ಷರು
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಪ್ರಧಾನ ಕಾರ್ಯದರ್ಶಿ, ವಾ ಮತ್ತು ಕೈ ಇಲಾಖೆ – ಸದಸ್ಯರು
3. ಸರ್ಕಾರದ ಪ್ರಧಾನ ಕಾರ್ಯದರ್ಶಿ ಆರ್ಥಿಕ ಇಲಾಖೆ – ಸದಸ್ಯರು
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಆಸುಇ (ಆಸು) – ಸದಸ್ಯರು (ಸಮಾವೇಶಕರು)

ತಮ್ಮ ಕೆಲಸ ಕಾರ್ಯಗಳಲ್ಲಿ ಅಸಾಧಾರಣ ಪ್ರತಿಭೆ ತೋರಿಸಿದ ಸರ್ಕಾರಿ ನೌಕರರಿಗೆ ಪ್ರಶಸ್ತಿ/ಪ್ರೋತ್ಸಾಹಧನ ನೀಡುವ ವಿಚಾರದಲ್ಲಿ ಸಮಿತಿಯು ತಾನು ಸಲಹೆ ಮಾಡಿದಂತೆ ಮಾರ್ಗಸೂಚಿಗಳನ್ನು ರಚಿಸಲು ಶಿಫಾರಸ್ಸು ಮಾಡಿತ್ತು.

4) ಉಲ್ಲೇಖ (4)ರಲ್ಲಿ ದಿನಾಂಕ: 19.08.2010ರ ಭಾರತ ಸರ್ಕಾರದ ಕಛೇರಿ ಜ್ಞಾಪನದಲ್ಲಿ ಕೇಂದ್ರ ಸರ್ಕಾರದ ನೌಕರರಿಗೆ ಹಾಗೂ ಸಾರ್ವಜನಿಕರಿಗೆ ನೀಡಲಾಗುತ್ತಿದ್ದ ಪರಿಷ್ಕೃತ ಪ್ರಶಸ್ತಿ ಯೋಜನೆಯನ್ನು ರದ್ದುಪಡಿಸಲಾಗಿದೆ.

5) ಉಲ್ಲೇಖ (5)ರ ಸರ್ಕಾರಿ ಆದೇಶದಲ್ಲಿ ಸೃಜನಾತ್ಮಕವಾದ ಹಾಗೂ ಪರಿಣಾಮಕಾರಿಯಾದ ಯೋಜನೆಗಳನ್ನು ಸರ್ಕಾರದ ಇಲಾಖೆಗಳು ಹಾಗೂ ಸಂಸ್ಥೆಗಳಲ್ಲಿ ಜಾರಿಗೆ ತರುವ ಸಲುವಾಗಿ 'ಚಾಲೆಂಜ್ ಫಂಡ್' ಯೋಜನೆಯನ್ನು ರೂಪಿಸಲಾಗಿದೆ.

6) ಉಲ್ಲೇಖ (6)ರ ಸರ್ಕಾರಿ ಆದೇಶದಲ್ಲಿ ಅಸಾಧಾರಣ ಪ್ರತಿಭೆ ತೋರಿಸಿದ ನಾಗರೀಕ ಸೇವಾ ಸಿಬ್ಬಂದಿಗೆ ಪ್ರಶಸ್ತಿ/ಪ್ರೋತ್ಸಾಹಧನ ನೀಡುವ ಬಗ್ಗೆ ಮಾರ್ಗಸೂಚಿಗಳನ್ನು ನೀಡಲಾಗಿತ್ತು.

**ಸರ್ಕಾರದ ಆದೇಶದ ಸಂ: ಸಿಆಸುಇ 63 ಇಆಸು 2008, ಬೆಂಗಳೂರು**
**ದಿನಾಂಕ: 04.03.2011.**

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯದಲ್ಲೂ, ಅತ್ಯುತ್ತಮ ಪ್ರಗತಿ ಸಾಧಿಸಿದ ನಾಗರೀಕ ಸೇವಾ ಸಿಬ್ಬಂದಿಗಳಿಗೆ ರಾಜ್ಯ ಪ್ರಶಸ್ತಿ ನೀಡುವ ಯೋಜನೆಯನ್ನು ರದ್ದುಪಡಿಸಲಾಗಿದೆ. ಹಾಗೂ ದಿನಾಂಕ: 13.8.2003 ಸರ್ಕಾರಿ ಆದೇಶ ಸಂ: ಸಿಆಸುಇ 34 ಇಆಸು 2002ರನ್ನು ಹಿಂತೆಗೆದುಕೊಳ್ಳಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಹಾಗೂ ಅವರ ಹೆಸರಿನಲ್ಲಿ,

(signature)

(ಎಲ್.ಎಸ್.ಚಂದ್ರಶೇಖರ ರಾವ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಆಸುಇ (ಆಸು-ತರಬೇತಿ).

ಹೊರಡಿಸಿದೆ 150
ದಿನಾಂಕ 15/03/11

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು – ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸಿ, 100 ಪ್ರತಿಗಳನ್ನು ಸಿಆಸುಇ (ಆಸು-ತರಬೇತಿ) ಶಾಖೆಗೆ ಒದಗಿಸಬೇಕಾಗಿ ಕೋರಿದೆ.

<u>ಪ್ರತಿ</u>:

1. ಮಹಾಲೇಖಪಾಲರು (ಎ&ಇ) / ಆಡಿಟ್-1 ಮತ್ತು 2), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು
3. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರು
4. ಎಲ್ಲಾ ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯತ್‌ನ ಕಾರ್ಯನಿರ್ವಾಹಕ ಅಧಿಕಾರಿಗಳು
5. ಎಲ್ಲಾ ಇಲಾಖಾ ಮುಖ್ಯಸ್ಥರು
6. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ/ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು
7. ಸರ್ಕಾರದ ಅಪರ ಮುಖ್ಯ ಕಾರ್ಯಧರ್ಶಿ ಮತ್ತು ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಪ್ರಧಾನ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ/ಇಂಧನ ಇಲಾಖೆ/ ಒಳಾಡಳಿತ ಇಲಾಖೆ ಆಪ್ತ ಕಾರ್ಯದರ್ಶಿಗಳು
9. ಸರ್ಕಾರದ ಎಲ್ಲಾ <u>ಅಪರ ಕಾರ್ಯದರ್ಶಿ</u>/<u>ಜಂಟಿ /ಉಪ</u>/<u>ಅಧೀನ</u> ಕಾರ್ಯದರ್ಶಿಗಳು
10. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ವೆಚ್ಚ-3/12)
11. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಸಿಆಸುಇ (ಸಿಬ್ಬಂದಿ) - 6 ಪ್ರತಿಗಳೊಂದಿಗೆ ವಾರ್ಷಿಕ ಸಂಗ್ರಹದಲ್ಲಿಡಲು
12. ಶಾಖಾ ರಕ್ಷಾ ಕಡತ / ಬಿಡಿ ಪ್ರತಿಗಳು.